**2021ರ ಕರ್ನಾಟಕ ಅಧಿನಿಯಮ ಸಂಖ್ಯೆ: 42**

# ಕರ್ನಾಟಕ ಧಾರ್ಮಿಕ ಕಟ್ಟಡಗಳ (ಸಂರಕ್ಷಣೆ) ಅಧಿನಿಯಮ, 2021

**ಪ್ರ ಕರಣಗಳು:**


**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-**
**2. ಪರಿಭಾಷೆಗಳು.-**
**3. ಧಾರ್ಮಿಕ ಕಟ್ಟಡಗಳ ಸಂರಕ್ಷಣೆ.-**
**4. ಸಾರ್ವಜನಿಕ ಸ್ಥಳಗಳಲ್ಲಿನ ಧಾರ್ಮಿಕ ಕಟ್ಟಡಗಳು.-**
**5. ಧಾರ್ಮಿಕ ಕಾರ್ಯಚಟುವಟಿಕೆಗಳಿಗೆ ಅವಕಾಶ ನೀಡುವುದು.-**
**6. ಕೈಗೊಂಡ ಕ್ರಮಕ್ಕೆ ವಿನಾಯಿತಿ.-**
**7. ನಿಯಮಗಳ ರಚನಾಧಿಕಾರ.-**
**8. ತೊಂದರೆಗಳನ್ನು ನಿವಾರಿಸಲು ಅಧಿಕಾರ.-**


## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**2021ರ ಅಧಿನಿಯಮ ಸಂಖ್ಯೆ 42.-** ಕೋಮು ಸೌಹಾರ್ದತೆಯನ್ನು ಕಾಪಾಡುವ ಸಲುವಾಗಿ ಮತ್ತು ಸಾರ್ವಜನಿಕ ಯಾವುದೇ ಧಾರ್ಮಿಕ ಭಾವನೆಗಳಿಗೆ ನೋವುಂಟಾಗದಂತೆ ಈ ಅಧಿನಿಯಮದ ಪ್ರಾರಂಭದ ದಿನಾಂಕಕ್ಕೆ ಮುಂಚೆ ಸಾರ್ವಜನಿಕ ಸ್ಥಳದಲ್ಲಿ ನಿರ್ಮಿಸಲಾದ ಧಾರ್ಮಿಕ ಕಟ್ಟಡಗಳ ಸಂರಕ್ಷಣೆಗಾಗಿ ಉಪಬಂಧ ಕಲ್ಪಿಸುವುದು, ಅಲ್ಲದೆ ಭವಿಷ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಅಂಥ ಅನಧಿಕೃತ ಧಾರ್ಮಿಕ ಕಟ್ಟಡಗಳ ನಿರ್ಮಾಣವನ್ನು ನಿರ್ಬಂಧಿಸುವುದು ಅವಶ್ಯವೆಂದು ಪರಿಗಣಿಸಲಾಗಿದೆ.


[2021ರ ವಿಧಾನಸಭೆಯ ವಿಧೇಯಕ ಸಂಖ್ಯೆ: 39, ಕಡತ ಸಂಖ್ಯೆ: ಸಂವ್ಯ ಶಾಇ 42 ಶಾಸನ 2021]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 18 ನೇ ನಮೂದನೆರಡಿಯಲ್ಲಿ ಬರುತ್ತದೆ]
[ಕರ್ನಾಟಕ ರಾಜ್ಯಪತ್ರ ದ ಭಾಗ-IVA, ವಿಶೇಷ ಪತ್ರಿಕೆ ಸಂಖ್ಯೆ: 842 ದಿನಾಂಕ:22.10.2021ರಲ್ಲಿ ಪ್ರಕಟಣೆಗೊಂಡಿದೆ]

## 2021 ರ ಕರ್ನಾಟಕ ಅಧಿನಿಯಮ ಸಂಖ್ಯೆ:42

(2021 ರ ಅಕ್ಟೋಬರ್ ತಿಂಗಳ 22ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ಧಾರ್ಮಿಕ ಕಟ್ಟಡಗಳ (ಸಂರಕ್ಷಣೆ) ಅಧಿನಿಯಮ, 2021

(2021 ರ ಅಕ್ಟೋಬರ್ ತಿಂಗಳ 19ನೇ ದಿನಾಂಕದಂದು ರಾಜ್ಯ ಪಾಲರಿಂದ ಒಪ್ಪಿಗೆಯನ್ನು ಪಡೆಯಲಾಗಿದೆ)

ಸಾರ್ವಜನಿಕ ಸ್ಥಳದಲ್ಲಿರುವ ಧಾರ್ಮಿಕ ಕಟ್ಟಡಗಳ ಸಂರಕ್ಷಣೆಗೆ ಉಪಬಂಧ ಕಲ್ಪಿಸಲು ಒಂದು ಅಧಿನಿಯಮ.

ಸಾರ್ವಜನಿಕ ಸ್ಥಳದಲ್ಲಿನ ಧಾರ್ಮಿಕ ಕಟ್ಟಡಗಳ ಸಂರಕ್ಷಣೆಗಾಗಿ ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗಾಗಿ ಉಪಬಂಧ ಕಲ್ಪಿಸುವುದು ವಿಹಿತವಾಗಿರುವುದರಿಂದ;

ಇದು, ಭಾರತ ಗಣರಾಜ್ಯದ ಎಪ್ಪತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ**.- (1) ಈ ಅಧಿನಿಯಮವನ್ನು ಕರ್ನಾಟಕ ಧಾರ್ಮಿಕ ಕಟ್ಟಡಗಳ (ಸಂರಕ್ಷಣೆ) ಅಧಿನಿಯಮ, 2021 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ಸ್ಥಳೀಯ ಪ್ರಾಧಿಕಾರಗಳು" ಎಂದರೆ, ರಾಜ್ಯ ಸರ್ಕಾರವು ಸಂಬಂಧಪಟ್ಟ ಕಾನೂನಿನ ಮೂಲಕ ರಚಿಸಿದ ಸ್ಥಳೀಯ ಸ್ವಯಂ ಆಡಳಿತ ಮತ್ತು ಸರ್ಕಾರಿ ಒಡೆತನದ, ಸರ್ಕಾರವು ನಿರ್ವಹಿಸುವ ಅಥವಾ ನಿಯಂತ್ರಿಸುವ ಎಲ್ಲಾ ಶಾಸನಾತ್ಮಕ ಅಥವಾ ಶಾಸನಾತ್ಮಕವಲ್ಲದ ಮಂಡಳಿಗಳು, ನಿಗಮಗಳು, ಕಂಪನಿಗಳು, ಸಮಿತಿ, ಇತ್ಯಾದಿಗಳು ಒಳಗೊಳ್ಳುತ್ತವೆ;

(ಬಿ) "ಸಾರ್ವಜನಿಕ ಸ್ಥಳ" ಎಂದರೆ, ಸರ್ಕಾರಕ್ಕೆ ಸೇರಿದ ಸ್ಥಳ ಮತ್ತು ಸ್ಥಳೀಯ ಪ್ರಾಧಿಕಾರ, ಸರ್ಕಾರಿ ಕಂಪನಿ ಅಥವಾ ರಾಜ್ಯ ಸರ್ಕಾರದ ಮಂಡಳಿ ಅಥವಾ ನಿಗಮ ಅಥವಾ ಯಾವುದೇ ಶಾಸನಾತ್ಮಕ ಅಥವಾ ಶಾಸನಾತ್ಮಕವಲ್ಲದ ಸಂಸ್ಥೆಗಳಿಗೆ ಸೇರಿರುವ ಯಾವುದೇ ಆವರಣಗಳು ಒಳಗೊಳ್ಳುತ್ತವೆ; ಮತ್ತು

(ಸಿ) "ಧಾರ್ಮಿಕ ಕಟ್ಟಡ" ಎಂದರೆ, ಕಾನೂನಿನ ಅಧಿಕಾರವಿಲ್ಲದೆ ಸಾರ್ವಜನಿಕ ಸ್ಥಳದಲ್ಲಿ ನಿರ್ಮಿಸಲಾದ ದೇವಸ್ಥಾನ, ಚರ್ಚು, ಮಸೀದಿ, ಗುರುದ್ವಾರ, ಬೌದ್ಧ ವಿಹಾರ, ಮಜರ್, ಇತ್ಯಾದಿಗಳಂಥ ಧಾರ್ಮಿಕ ಕಟ್ಟಡ.

**3. ಧಾರ್ಮಿಕ ಕಟ್ಟಡಗಳ ಸಂರಕ್ಷಣೆ.-** ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಅಡಕವಾಗಿದ್ದರೂ ಅಥವಾ ಯಾವುದೇ ನ್ಯಾಯಾಲಯ, ನ್ಯಾಯಾಧಿಕರಣ ಅಥವಾ ಪ್ರಾಧಿಕಾರದ ಯಾವುದೇ ತೀರ್ಪು, ಡಿಕ್ರಿ ಅಥವಾ ಆದೇಶ ಏನೇ ಇದ್ದರೂ, ಈ ಅಧಿನಿಯಮದ ಪ್ರಾರಂಭದ ದಿನಾಂಕದಿಂದ, ಈ ಅಧಿನಿಯಮದ ಅಥವಾ ಅದರಡಿಯಲ್ಲಿ ರಚಿಸಿದ ನಿಯಮಗಳ ಉಪಬಂಧಗಳಿಗೆ ಒಳಪಟ್ಟು, ಸರ್ಕಾರವು ನಿಯಮಿಸಬಹುದಾದಂಥ ರೀತಿಯಲ್ಲಿ ಮತ್ತು ಅಂಥ ಷರತ್ತುಗಳಿಗೆ ಒಳಪಟ್ಟು

ಈ ಅಧಿನಿಯಮ ಪ್ರಾರಂಭದ ದಿನಾಂಕದಂದು ಅಸ್ತಿತ್ವದಲ್ಲಿರುವ ಧಾರ್ಮಿಕ ಕಟ್ಟಡಗಳನ್ನು ಸಂರಕ್ಷಿಸತಕ್ಕದ್ದು:

ಪರಂತು, ಅವುಗಳನ್ನು ತೆರವಿಗೆ ಸಂಬಂಧಿಸಿದಂತೆ ಯಾವುದೇ ಪ್ರಕರಣವು ಯಾವುದೇ ನ್ಯಾಯಾಲಯದಲ್ಲಿ ಇತ್ಯರ್ಥದಲ್ಲಿದ್ದರೆ ಮತ್ತು ನಿಯಮಿಸಬಹುದಾದಂಥ ಇತರ ಸನ್ನಿವೇಶಗಳಲ್ಲಿ ಯಾವುದೇ ಸಂರಕ್ಷಣೆಯನ್ನು ಮಾಡತಕ್ಕದ್ದಲ್ಲ.

**4. ಸಾರ್ವಜನಿಕ ಸ್ಥಳಗಳಲ್ಲಿನ ಧಾರ್ಮಿಕ ಕಟ್ಟಡಗಳು.-** ರಾಜ್ಯ ಸರ್ಕಾರ ಅಥವಾ ಯಾವುದೇ ಸ್ಥಳೀಯ ಪ್ರಾಧಿಕಾರವು ಭವಿಷ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ಧಾರ್ಮಿಕ ಕಟ್ಟಡವನ್ನು ನಿರ್ಮಿಸಲು ಸೂಕ್ತ ಪರವಾನಗಿಯಿಲ್ಲದೆ ಅವಕಾಶವನ್ನು ನೀಡತಕ್ಕದ್ದಲ್ಲ.

**5. ಧಾರ್ಮಿಕ ಕಾರ್ಯಚಟುವಟಿಕೆಗಳಿಗೆ ಅವಕಾಶ ನೀಡುವುದು.-** ಜಿಲ್ಲಾಡಳಿತವು, ರೂಢಿ, ಕಾನೂನು, ರಿವಾಜಿಗೆ ಮತ್ತು ರಾಜ್ಯ ಸರ್ಕಾರವು ಕಾಲ ಕಾಲಕ್ಕೆ ವಿಧಿಸಬಹುದಾದಂಥ ಯಾವುದೇ ಇತರ ಷರತ್ತುಗಳಿಗೆ ಒಳಪಟ್ಟು ಅಂಥ ಸಂರಕ್ಷಿತ ಕಟ್ಟಡಗಳಲ್ಲಿ ಯಾವುದೇ ಧಾರ್ಮಿಕ ಕಾರ್ಯಚಟುವಟಿಕೆಗಳನ್ನು ನಡೆಸಲು ಅವಕಾಶ ನೀಡಬಹುದು.

**6. ಕೈಗೊಂಡ ಕ್ರಮಕ್ಕೆ ವಿನಾಯಿತಿ.-**ರಾಜ್ಯ ಸರ್ಕಾರ ಅಥವಾ ರಾಜ್ಯ ಸರ್ಕಾರದ ಯಾರೇ ಅಧಿಕಾರಿ ಅಥವಾ ಇತರ ನೌಕರರು ಈ ಅಧಿನಿಯಮದ ಅಡಿಯಲ್ಲಿ ಅಥವಾ ಅದರಡಿ ರಚಿಸಿದ ನಿಯಮಗಳ ಅಡಿಯಲ್ಲಿ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ಅವರ ವಿರುದ್ಧ ಯಾವುದೇ ಕಾನೂನು ವ್ಯವಹರಣೆಯನ್ನು ಹೂಡತಕ್ಕದ್ದಲ್ಲ.

**7. ನಿಯಮಗಳ ರಚನಾಧಿಕಾರ.-** (1) ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯ ಪತ್ರದಲ್ಲಿ ಅಧಿಸೂಚನೆಯ ಮೂಲಕ, ಪೂರ್ವಪ್ರಕಟಣೆಯ ತರುವಾಯ, ಈ ಅಧಿನಿಯಮದ ಉದ್ದೇಶಗಳನ್ನು ಈಡೇರಿಸಲು ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಿರಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಅದು ಅಧಿವೇಶನದಲ್ಲಿರುವಾಗ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನವು ಮುಕ್ತಾಯವಾಗುವುದಕ್ಕೆ ಮೊದಲು ಉಭಯ ಸದನಗಳು ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಲು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸತಕ್ಕದ್ದಲ್ಲವೆಂದು ಉಭಯ ಸದನಗಳು ಒಪ್ಪಿದರೆ ತದನಂತರ ಅಂಥ ನಿಯಮವು ಹಾಗೆ ಮಾರ್ಪಾಟಾದ ರೀತಿಯಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರವಾಗಿ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಯಾವುದೇ ಅಂಥ ಮಾರ್ಪಾಡು ಅಥವಾ ರದ್ದತಿಯು ಆ ನಿಯಮದ ಅಡಿಯಲ್ಲಿ ಈ ಮೊದಲು ಮಾಡಲಾದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವಾಗತಕ್ಕದ್ದಲ್ಲ.

**8. ತೊಂದರೆಗಳನ್ನು ನಿವಾರಿಸಲು ಅಧಿಕಾರ.-** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವುದಕ್ಕೆ ಸಂಬಂಧಿಸಿದಂತೆ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯ ಪತ್ರದಲ್ಲಿ ಆದೇಶವನ್ನು ಪ್ರಕಟಿಸುವ ಮೂಲಕ ಅಂಥ ತೊಂದರೆಯನ್ನು

ನಿವಾರಿಸುವುದಕ್ಕಾಗಿ ಅವಶ್ಯಕವೆಂದು ಅಥವಾ ಸೂಕ್ತವೆಂದು ತನಗೆ ಕಂಡುಬರಬಹುದಾದ, ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗಿರದ ಅಂಥ ಉಪಬಂಧಗಳನ್ನು ರಚಿಸಬಹುದು:

ಪರಂತು, ಈ ಅಧಿನಿಯಮದ ಪ್ರಾರಂಭದ ದಿನಾಂಕದಿಂದ ಎರಡು ವರ್ಷಗಳ ಅವಧಿಯು ಮುಕ್ತಾಯವಾದ ತರುವಾಯ ಅಂಥ ಯಾವುದೇ ಆದೇಶವನ್ನು ಹೊರಡಿಸತಕ್ಕದ್ದಲ್ಲ.

(2) ಈ ಪ್ರಕರಣದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ಆದೇಶವನ್ನು ಅದನ್ನು ಹೊರಡಿಸಿದ ತರುವಾಯ ಆದಷ್ಟು ಬೇಗನೇ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ.ಶ್ರೀಧರ್**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.